**All India Radio: Bangalore**
**National Bulletin In Kannada**
**08.02.2025  13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**08.02.2025  13.10 p.m.**
**<><><><>**

ಮುಖ್ಯಾಂಶಗಳು

1. ದೆಹಲಿ ವಿಧಾನಸಭಾ ಚುನಾವಣಾ ಮತ ಎಣಿಕೆ ಪ್ರಗತಿಯಲ್ಲಿ; ಬೆಜೆಪಿ ೪೮ ಕ್ಷೇತ್ರಗಳಲ್ಲಿ, ಆಮ್‌ಆದ್ಮಿ ಪಕ್ಷ ೨೨ ಕ್ಷೇತ್ರದಲ್ಲಿ ಮುನ್ನಡೆ
2. ಇದೇ ಸೋಮವಾರದಂದು ಪ್ರಧಾನಿ ನರೇಂದ್ರ ಮೋದಿ ಪರೀಕ್ಷಾ ಪೇ ಚರ್ಚಾ ಸಂವಾದದಲ್ಲಿ ವಿದ್ಯಾರ್ಥಿಗಳೊಂದಿಗೆ ಭಾಗಿ
3. ನೂತನ ಆದಾಯ ತೆರಿಗೆ ಮಸೂದೆ ಮುಂದಿನವಾರ ಕೇಂದ್ರ ಸಚಿವ ಸಂಪುಟದ ಅನುಮೋದನೆ ಪಡೆದ ನಂತರ ಸಂಸತ್ತಿನಲ್ಲಿ ಮಂಡನೆ
4. ೨೦೨೫ರ ಫ್ರೀಸ್ಟೈಲ್ ಚೆಸ್ ಗ್ರ್ಯಾಂಡ್ ಸ್ಲ್ಯಾಮ್: ೬ನೇಯ ಸ್ಥಾನದಲ್ಲಿ ಡಿ. ಗುಕೇಶ್

<><><><>

ದೆಹಲಿ ವಿಧಾನಸಭೆ ಚುನಾವಣೆಯ ಮತ ಎಣಿಕೆ ಕಾರ್ಯ ಪ್ರಗತಿಯಲ್ಲಿದ್ದು, ಇತ್ತೀಚಿನ ವರದಿಯಂತೆ ಎಲ್ಲಾ ೭೦ ವಿಧಾನಸಭಾ ಸ್ಥಾನಗಳ ಅಂಕಿಅಂಶಗಳು ಲಭ್ಯವಿದ್ದು, ೧೯ ಕೇಂದ್ರಗಳಲ್ಲಿ ಮತ ಎಣಿಕೆ ನಡೆಯುತ್ತಿದೆ. ಬಿಜೆಪಿ ೪೮ ಸ್ಥಾನಗಳಲ್ಲಿ ಮುನ್ನಡೆಯಲ್ಲಿದ್ದರೆ, ಆಮ್ ಆದ್ಮಿ ಪಕ್ಷ ೨೨ ಸ್ಥಾನಗಳಲ್ಲಿ ಮುನ್ನಡೆಯಲ್ಲಿದೆ.

***ಈ ಕುರಿತಂತೆ ಒಂದು ವರದಿ ***ಚೇತನ್

ದೆಹಲಿ ಎನ್‌ಸಿಟಿಯಲ್ಲಿ, ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಮತ್ತು ಕಾಂಗ್ರೆಸ್‌ನ ಸಂದೀಪ್ ದೀಕ್ಷಿತ್ ನವದೆಹಲಿ ಕ್ಷೇತ್ರದಲ್ಲಿ ತಮ್ಮ ಹತ್ತಿರದ ಬಿಜೆಪಿ ಅಭ್ಯರ್ಥಿ ಪರ್ವೇಶ್ ಸಾಹಿಬ್ ಸಿಂಗ್‌ಗಿಂತ ಹಿಂದುಳಿದಿದ್ದಾರೆ. ಇತರೆ ಪ್ರಮುಖ ಆಮ್ ಆದ್ಮಿ ಪಕ್ಷದ ನಾಯಕರಾದ ಮುಖ್ಯಮಂತ್ರಿ ಅತಿಶಿ, ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ, ಸೋಮನಾಥ್ ಭಾರ್ತಿ, ಸೌರಭ್ ಭಾರದ್ವಾಜ್ ಮತ್ತು ಅವಧ್ ಓಜಾ ಹಿನ್ನಡೆಯಲ್ಲಿದ್ದಾರೆ. ಕಲ್ಕಾಜಿ ಕ್ಷೇತ್ರದಲ್ಲಿ ಅತಿಶಿ ಹಿನ್ನಡೆಯಲ್ಲಿದ್ದಾರೆ, ಅಲ್ಲಿ ಬಿಜೆಪಿಯ ರಮೇಶ್ ಬಿಧುರಿ ಮುನ್ನಡೆಯಲ್ಲಿದ್ದಾರೆ. ತ್ರಿ ನಗರ ಕ್ಷೇತ್ರದ ೧೪

ಸುತ್ತಿನ ಎಣಿಕೆಯ ನಂತರ ಬಿಜೆಪಿಯ ತಿಲಕ್ ರಾಮ್ ಗುಪ್ತಾ ಅವರ ಪ್ರತಿಸ್ಪರ್ಧಿ ಆಮ್ ಆದ್ಮಿ ಪಕ್ಷದ ಪ್ರೀತಿ ಜಿತೇಂದರ್ ತೋಮರ್‌ಗಿಂತ ೧೫ ಸಾವಿರಕ್ಕೂ ಹೆಚ್ಚು ಮತಗಳಿಂದ ಮುನ್ನಡೆಯಲ್ಲಿದ್ದಾರೆ. ಶಾಲಿಮಾರ್ ಬಾಗ್ ಕ್ಷೇತ್ರದಲ್ಲಿ, ೧೪ ಸುತ್ತಿನ ಎಣಿಕೆಯ ನಂತರ ಬಿಜೆಪಿಯ ರೇಖಾ ಗುಪ್ತಾ ಹತ್ತಿರದ ಪ್ರತಿಸ್ಪರ್ಧಿ ಆಮ್ ಆದ್ಮಿ ಪಕ್ಷದ ಬಂದನ ಕುಮಾರಿ ವಿರುದ್ಧ ೨೯ ಸಾವಿರಕ್ಕೂ ಹೆಚ್ಚು ಮತಗಳಿಂದ ಮುಂದಿದ್ದಾರೆ. ದೆಹಲಿ ಕಂಟೋನ್ಮೆಂಟ್‌ನಲ್ಲಿ ೮ ಸುತ್ತುಗಳಲ್ಲಿ ೭ನೇ ಸುತ್ತಿನ ನಂತರ ಆಮ್ ಆದ್ಮಿ ಪಕ್ಷದ ವೀರೇಂದ್ರ ಸಿಂಗ್ ಕಡಿಯಾನ್ ೧೭೦೦ ಕ್ಕೂ ಹೆಚ್ಚು ಮತಗಳಿಂದ ಮುನ್ನಡೆಯಲ್ಲಿದ್ದಾರೆ. ೧೨ ಸುತ್ತುಗಳ ಎಣಿಕೆಯ ನಂತರ ಕೊಂಡ್ಲಿಯಲ್ಲಿ ಆಮ್ ಆದ್ಮಿ ಪಕ್ಷದ ಕುಲದೀಪ್ ಕುಮಾರ್ ಸುಮಾರು ೮೦೦೦ ಮತಗಳಿಂದ ಮುನ್ನಡೆಯಲ್ಲಿದ್ದಾರೆ. ರಾಜೌರಿ ಗಾರ್ಡನ್‌ನಲ್ಲಿ ೧೨ ಸುತ್ತುಗಳಲ್ಲಿ ೧೧ ನೇ ಸುತ್ತಿನ ನಂತರ ಬಿಜೆಪಿಯ ಮಂಜಿಂದರ್ ಸಿಂಗ್ ಸಿರ್ಸಾ ೧೬ ಸಾವಿರಕ್ಕೂ ಹೆಚ್ಚು ಮತಗಳಿಂದ ಮುನ್ನಡೆಯಲ್ಲಿದ್ದಾರೆ. ಸ್ತೂರ್ಬಾ ನಗರದಲ್ಲಿ, ೧೫ ಸುತ್ತುಗಳ ೧೩ನೇ ಸುತ್ತಿನ ನಂತರ ಬಿಜೆಪಿಯ ನೀರಜ್ ಬಸೋಯಾ ಸುಮಾರು ೧೦ ಸಾವಿರ ಮತಗಳಿಂದ ಮುನ್ನಡೆಯಲ್ಲಿದ್ದಾರೆ. ಬಿಜೆಪಿಯ ಹಿರಿಯ ನಾಯಕ ಮತ್ತು ವಿಶ್ವಾಸ್ ನಗರದಿಂದ ಮೂರು ಬಾರಿ ಶಾಸಕರಾಗಿರುವ ಓಂ ಪ್ರಕಾಶ್ ಶರ್ಮಾ ೧೬ ಸುತ್ತುಗಳ ಎಣಿಕೆಯ ೧೪ನೇ ಸುತ್ತಿನ ನಂತರ ೨೩ ಸಾವಿರಕ್ಕೂ ಹೆಚ್ಚು ಮತಗಳಿಂದ ಮುನ್ನಡೆಯಲ್ಲಿದ್ದಾರೆ. ಮುಸ್ತಾಬಾದ್ ಕ್ಷೇತ್ರದಲ್ಲಿ ಬಿಜೆಪಿಯ ಮೋಹನ್ ಸಿಂಗ್ ಬಿಶ್ಟ್ ೩೮ ಸಾವಿರಕ್ಕೂ ಹೆಚ್ಚು ಮತಗಳಿಂದ ಮುನ್ನಡೆಯಲ್ಲಿದ್ದಾರೆ. ಘೋಂಡಾದಲ್ಲಿ ಬಿಜೆಪಿಯ ಅಜಯ್ ಮಹಾವರ್ ಸುಮಾರು ೧೫ ಸಾವಿರ ಮತಗಳ ಮುನ್ನಡೆ ಕಾಯ್ದುಕೊಂಡಿದ್ದಾರೆ. ಬಾಬರ್‌ಪುರ ಕ್ಷೇತ್ರದಲ್ಲಿ ಆಮ್ ಆದ್ಮಿ ಪಕ್ಷದ ನಾಯಕ ಗೋಪಾಲ್ ರೈ ತಮ್ಮ ಹತ್ತಿರದ ಪ್ರತಿಸ್ಪರ್ಧಿಗಿಂತ ೨೦ ಸಾವಿರಕ್ಕೂ ಹೆಚ್ಚು ಮತಗಳಿಂದ ಮುನ್ನಡೆಯಲ್ಲಿದ್ದಾರೆ. ಡಿಯೋಲಿಯಲ್ಲಿ ಆಮ್ ಆದ್ಮಿ ಪಕ್ಷದ ಪ್ರೇಮ್ ಚೌಹಾಣ್ ೧೯ ಸಾವಿರಕ್ಕೂ ಹೆಚ್ಚು ಮುನ್ನಡೆ ಕಾಯ್ದುಕೊಂಡಿದ್ದಾರೆ. ಜಂಗ್‌ಪುರ ಕ್ಷೇತ್ರದಲ್ಲಿ ಆಮ್ ಆದ್ಮಿ ಪಕ್ಷದ ಹಿರಿಯ ನಾಯಕ ಮತ್ತು ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಬಿಜೆಪಿಯ ತರ್ವಿಂದರ್ ಸಿಂಗ್ ಮಾರ್ವಾ ಅವರಿಗಿಂತ ಹಿಂದುಳಿದಿದ್ದಾರೆ. ಪತ್ಪರ್‌ಗಂಜ್ ಕ್ಷೇತ್ರದಿಂದ ಬಿಜೆಪಿಯ ರವಿ ನೇಗಿ ಸುಮಾರು ೧೮ ಸಾವಿರ ಮತಗಳಿಂದ ಮುನ್ನಡೆಯಲ್ಲಿದ್ದಾರೆ, ಆಮ್ ಆದ್ಮಿ ಪಕ್ಷದ ಅವಧ್ ಓಜಾ ಹಿನ್ನಡೆಯಲ್ಲಿದ್ದಾರೆ. ಗ್ರೇಟರ್ ಕೈಲಾಶ್ ಕ್ಷೇತ್ರದಲ್ಲಿ ಆಮ್ ಆದ್ಮಿ ಪಕ್ಷದ ಸೌರಭ್ ಭಾರದ್ವಾಜ್ ಹಿನ್ನಡೆಯಲ್ಲಿದ್ದಾರೆ. ಮಾಲ್ವಿಯಾ ನಗರದಲ್ಲಿ ಆಮ್ ಆದ್ಮಿ ಪಕ್ಷದ ಸೋಮನಾಥ್ ಭಾರ್ತಿ

ಹಿನ್ನಡೆಯಲ್ಲಿದ್ದಾರೆ. ಬದ್ಲಿ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ದೇವೇಂದರ್ ಯಾದವ್ ಹಿನ್ನಡೆಯಲ್ಲಿದ್ದಾರೆ. ಕಾಂಗ್ರೆಸ್‌ನ ಅಲ್ಕಾ ಲಂಬಾ ಕೂಡ ಹಿನ್ನಡೆಯಲ್ಲಿದ್ದಾರೆ. ಬವಾನಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ರವೀಂದರ್ ಇಂದ್ರಜ್ ಸಿಂಗ್ ೧೪ ಸಾವಿರ ಮತಗಳಿಂದ ಮುನ್ನಡೆಯಲ್ಲಿದ್ದಾರೆ ರಿಥಾಲಾದಲ್ಲಿ ಬಿಜೆಪಿಯ ಕುಲ್ವಂತ್ ರಾಣಾ ೧೯ ಸಾವಿರ ಮತಗಳಿಂದ ಮುನ್ನಡೆಯಲ್ಲಿದ್ದಾರೆ. ಈ ನಡುವೆ, ಉತ್ತರ ಪ್ರದೇಶದ ಮಿಲ್ಕಿಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ, ಬಿಜೆಪಿಯ ಚಂದ್ರಭಾನು ಪಾಸ್ವಾನ್ ೩೬ ಸಾವಿರಕ್ಕೂ ಹೆಚ್ಚು ಮತಗಳಿಂದ ಮುನ್ನಡೆಯಲ್ಲಿದ್ದಾರೆ. ತಮಿಳುನಾಡಿನ ಈರೋಡ್ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತ ಎಣಿಕೆ ಪ್ರಗತಿಯಲ್ಲಿದೆ. ದ್ರಾವಿಡ ಮುನ್ನೇತ್ರ ಕಳಗಂನ ಚಂದ್ರಕುಮಾರ್ ವಿ.ಸಿ. ೨೪ ಸಾವಿರಕ್ಕೂ ಹೆಚ್ಚು ಮತಗಳಿಂದ ಮುನ್ನಡೆಯಲ್ಲಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿವರ್ಷವೂ, ಪರೀಕ್ಷೆಗಳನ್ನು ಎದುರಿಸುವ ಕುರಿತಂತೆ ವಿದ್ಯಾರ್ಥಿಗಳೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮ ಪರೀಕ್ಷಾ ಪೇ ಚರ್ಚಾ ಇದೇ ಸೋಮವಾರ ಬೆಳಗ್ಗೆ ೧೧ ಗಂಟೆಗೆ ಜರುಗಲಿದೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರಧಾನಮಂತ್ರಿಯವರ ಸಂವಾದ ಕಾರ್ಯಕ್ರಮವನ್ನು ದೂರದರ್ಶನ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು. ೨೦೧೮ರಲ್ಲಿ ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಅಲ್ಲದೇ ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ.

<><><>

ನೂತನ ಆದಾಯ ತೆರಿಗೆ ಮಸೂದೆಯನ್ನು ಮುಂದಿನ ವಾರ ಸಂಸತ್ತಿನಲ್ಲಿ ಮಂಡಿಸಲಾಗುವುದು. ಮಧ್ಯಮ ವರ್ಗದವರಿಗೆ ಅನುಕೂಲವಾಗುವ ಮತ್ತು ಸಂಪೂರ್ಣ ಫೈಲಿಂಗ್ ಪ್ರಕ್ರಿಯೆಯನ್ನು ಸರಳಗೊಳಿಸುವ ಗುರಿಯನ್ನು ಈ ಮಸೂದೆ ಹೊಂದಿದೆ. ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆದ ಈ ಮಸೂದೆಯನ್ನು ಮುಂದಿನ ವಾರ ಸಂಸತ್ತಿನಲ್ಲಿ ಪರಿಚಯಿಸಲಾಗುವುದು ಮತ್ತು ನಂತರ ಅದನ್ನು ಸಂಸತ್ತಿನ ಹಣಕಾಸು ಸ್ಥಾಯಿ ಸಮಿತಿಗೆ ಕಳುಹಿಸಲಾಗುವುದು.

<><><>

ಮನರಂಜನೆ, ಸೃಜನಶೀಲತೆ ಮತ್ತು ಸಂಸ್ಕೃತಿಯನ್ನು ಒಟ್ಟುಗೂಡಿಸುವ ಜಾಗತಿಕ ಶೃಂಗಸಭೆಯಾದ ವೇವ್ಸ್ ಸಲಹಾ ಮಂಡಳಿಯ ವಿಸ್ತೃತ ಸಭೆಯನ್ನು ಪ್ರಧಾನಿ ನರೇಂದ್ರ ಮೋದಿ ನಡೆಸಿದರು. ಸಭೆಯಲ್ಲಿ ಅಮಿತಾಬ್ ಬಚ್ಚನ್, ದಿಲ್ಜಿತ್ ದೋಸಾಂಜ್, ರಜನಿಕಾಂತ್, ಶಾರುಖ್ ಖಾನ್, ರಣಬೀರ್ ಕಪೂರ್, ಚಿರಂಜೀವಿ, ಅನಿಲ್ ಕಪೂರ್, ಅಕ್ಷಯ್ ಕುಮಾರ್ ಮತ್ತು ಅನುಪಮ್ ಖೇರ್ ಸೇರಿದಂತೆ ಭಾರತ ಮತ್ತು ಪ್ರಪಂಚದ ಇತರೆ ಉನ್ನತ ವೃತ್ತಿಪರರೊಂದಿಗೆ ಸಂವಾದ ನಡೆಸಿದರು. ಸಂಗೀತ ನಿರ್ದೇಶಕ ಎ. ಆರ್. ರೆಹಮಾನ್, ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಖೇಶ್ ಅಂಬಾನಿ, ಮೈಕ್ರೋಸಾಫ್ಟ್ ಸಿಇಒ ಸತ್ಯ ನಾಡೆಲ್ಲಾ, ಮಹೀಂದ್ರಾ ಮತ್ತು ಮಹೀಂದ್ರಾ ಅಧ್ಯಕ್ಷ ಆನಂದ್ ಮಹೀಂದ್ರಾ ಇತರರು ಕೂಡ ಸಂವಾದದಲ್ಲಿ ಪಾಲ್ಗೊಂಡಿದ್ದರು.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ, ಸೋಮವಾರದಿಂದ ಮೂರು ದಿನ ಫ್ರಾನ್ಸ್‌ಗೆ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಶೃಂಗಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ದೆಹಲಿಯಲ್ಲಿ ತಿಳಿಸಿದ್ದಾರೆ. ಇದೇ ತಿಂಗಳ ೧೨ ಮತ್ತು ೧೩ ರಂದು ಪ್ರಧಾನಿ ನರೇಂದ್ರ ಮೋದಿ, ಅಮೆರಿಕಾಕ್ಕೆ ಭೇಟಿ ನೀಡಲಿದ್ದು, ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

<><><>

೨೦೨೫ರ ಫ್ರೀಸ್ಟೈಲ್ ಚೆಸ್ ಗ್ರ್ಯಾಂಡ್ ಸ್ಲ್ಯಾಮ್ ಜರ್ಮನಿಯ ಬಾಲ್ಟಿಕ್ ಕೋಸ್ಟ್‌ನಲ್ಲಿರುವ ವೈಸೆನ್‌ಹೌಸ್‌ನಲ್ಲಿ ನಿನ್ನೆ ಆರಂಭವಾಯಿತು. ೫ ನೇ ಸುತ್ತಿನ ನಂತರ, ಫ್ಯಾಬಿಯಾನೊ ಕರುವಾನಾ

೪.೫ ಅಂಕಗಳೊಂದಿಗೆ ಪಾಯಿಂಟ್ಸ್ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ, ಜಾವೋಖಿರ್ ಸಿಂದಾರೋವ್ ನಂತರದ ಸ್ಥಾನದಲ್ಲಿದ್ದಾರೆ. ಭಾರತೀಯ ಗ್ರ್ಯಾಂಡ್ ಮಾಸ್ಟರ್ ಡಿ ಗುಕೇಶ್ ಕೇವಲ ೨ ಅಂಕಗಳೊಂದಿಗೆ ಆರನೇ ಸ್ಥಾನದಲ್ಲಿದ್ದಾರೆ. ಇನ್ನೂ ೪ ಸುತ್ತುಗಳು ಬಾಕಿ ಉಳಿದಿದ್ದು, ಅಗ್ರ ೮ ಆಟಗಾರರು ನಾಕೌಟ್ ವಿಭಾಗಕ್ಕೆ ಅರ್ಹತೆ ಪಡೆಯುತ್ತಾರೆ.

<><><><>

ಜಮ್ಮು ಮತ್ತು ಕಾಶ್ಮೀರದಲ್ಲಿ ಮಿಷನ್ ಸಕ್ಷಮ್ ಯೋಜನೆಯಡಿ ಅಂಗನವಾಡಿ ಮತ್ತು ಪೋಷಣ್ ಕಾರ್ಯಕ್ರಮದ ಎರಡನೆ ಚರಣದಲ್ಲಿ ೩೩೮ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ. ನವೀಕರಿಸಿದ ಸಕ್ಷಮ್ ಅಂಗನವಾಡಿಗಳಲ್ಲಿ ಎಲ್ಇಡಿ ಪರದೆಗಳು, ನೀರಿನ ಶುದ್ಧೀಕರಣ ಯಂತ್ರ, ಪೋಷಣ್ ವಾಟಿಕಾ ಒಳಗೊಂಡಿರುತ್ತದೆ. ಮಕ್ಕಳು ಮತ್ತು ತಾಯಂದಿರಿಗೆ ಉತ್ತಮ ಸೇವೆಗಳನ್ನು ಒದಗಿಸಲು ಕಲಿಕಾ ಸಾಮಗ್ರಿಗಳನ್ನು ಒದಗಿಲಿಸಲಾಗುತ್ತದೆ. ಪೌಷ್ಠಿಕಾಂಶ ಮತ್ತು ಬಾಲ್ಯದಲ್ಲಿ ದೊರೆಯಬೇಕಾದ ಆರೈಕೆ ಸೇವೆಗಳನ್ನು ಸುಧಾರಿಸುವ ಗುರಿಯನ್ನು ಈ ಉಪಕ್ರಮದಡಿಯಲ್ಲಿ ಹೊಂದಲಾಗಿದೆ. ಭಾರತದಾದ್ಯಂತ ಎರಡು ಲಕ್ಷ ಅಂಗನವಾಡಿ ಕೇಂದ್ರಗಳನ್ನು ಆಧುನೀಕರಿಸಲಾಗುತ್ತಿದ್ದು, ಐದು ವರ್ಷಗಳಲ್ಲಿ ೫೦ ಸಾವಿರ ಹೊಸ ಕೇಂದ್ರಗಳನ್ನು ಯೋಜಿಸಲಾಗಿದೆ. ಅಲ್ಲದೆ, ಎಲ್ಲಾ ಮಿನಿ-ಅಂಗನವಾಡಿಗಳನ್ನು ಪೂರ್ಣ ಪ್ರಮಾಣದ ಕೇಂದ್ರಗಳಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಆದೇಶಿಸಿದೆ.

<><><><>

ಶೀತ ಗಾಳಿಯಿಂದಾಗಿ ರಾಜಸ್ಥಾನದ ಫತೇಪುರದಲ್ಲಿ ತಾಪಮಾನ ೩.೨ ಡಿಗ್ರಿ ಸೆಲ್ಸಿಯಸ್ ತಲುಪಿದೆ. ರಾಜಸ್ತಾನದ ಹಲವು ಜಿಲ್ಲೆಗಳಲ್ಲಿ ತಾಪಮಾನದಲ್ಲಿ ಇಳಿಕೆ ಕಂಡುಬಂದಿರುವುದರಿಂದ ಇಂದು ಕೆಲವು ಭಾಗಗಳಲ್ಲಿ ಶೀತಗಾಳಿ ಮುಂದುವರೆದಿದೆ, ಇದಕ್ಕೆ ಕಾರಣ ನಿರಂತರವಾಗಿ ಉತ್ತರ ದಿಕ್ಕಿನಿಂದ ಬೀಸುತ್ತಿರುವ ಗಾಳಿ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>